MAY 14,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಂಜಾಬ್‌ನ ಆದಂಪುರ ವಾಯುನೆಲೆಗೆ ಭೇಟಿ ನೀಡಿ ವಾಯುಪಡೆ ಯೋಧರು, ಸೇನಾಧಿಕಾರಿಗಳನ್ನು ಅಭಿನಂದಿಸಿರುವುದು, ದೇಶದ ಸೈನಿಕರ ಆತ್ಮಸ್ಥೈರ್ಯವನ್ನು ಹೆಚ್ಚಿಸಿದೆ ಹಾಗೂ ಪಾಕಿಸ್ತಾನಕ್ಕೆ ಎಚ್ಚರಿಕೆ ಸಂದೇಶ ನೀಡಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ ಬ್ರಿಜೇಶ್ ಚೌಟ ಹೇಳಿದರು. ಮಂಗಳೂರಿನಲ್ಲಿ ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಭಾರತೀಯ ಸೇನಾ ಪಡೆಗಳು ವಿಶ್ವದ ಅತ್ಯುತ್ತಮ ಮಿಲಿಟರಿ ಶಸ್ತ್ರಗಳನ್ನು ಹೊಂದಿವೆ. ’ಆಪರೇ ’ನ್ ಸಿಂಧೂರ್’ ಮೂಲಕ ದೇಶದ ಮಿಲಿಟರಿ ಸಾಮರ್ಥ್ಯ, ಶಕ್ತಿ ಹಾಗೂ ತಂತ್ರಜ್ಞಾನದ ಬೆಳವಣಿಗೆಯನ್ನು ಜಗತ್ತಿಗೆ ಸಾಬೀತುಪಡಿಸಲಾಗಿದೆ ಎಂದರು. ರಕ್ಷಣಾ ವಲಯದ ಆತ್ಮನಿರ್ಭರ್ ಭಾರತ್ ಹಾಗೂ ಮೇಕ್ ಇನ್ ಇಂಡಿಯಾ ಉಪಕ್ರಮಗಳಗಳು, ಸ್ವದೇಶೀಕರಣ ಹಾಗೂ ಆಧುನೀಕರಣದ ಹೊಸ ಮೈಲುಗಲ್ಲನ್ನು ಸ್ಥಾಪಿಸಿ, ನಿಖರತೆ ಹಾಗೂ ಪ್ರಖರತೆಯನ್ನು ತೋರಿವೆ ಎಂದರು.

<><><>

ವರಕವಿ, ಜ್ಞಾನಪೀಠ ಪ್ರಶಸ್ತಿ ವಿಜೇತ ದ.ರಾ ಬೇಂದ್ರೆ ಅವರ ಕವಿ ನಿವಾಸ ಶ್ರೀಮಾತಾದ ಅಂಚೆ ಮೊಹರು ಇಂದು ಬಿಡುಗಡೆಗೊಂಡಿತು. ಭಾರತೀಯ ಅಂಚೆ ಇಲಾಖೆ ಮೂಲಕ ರಾಜ್ಯದಲ್ಲಿ ಒಟ್ಟು 88 ವಿಶೇ ’ ತಾಣಗಳ ಶಾಶ್ವತ ಚಿತ್ರಿತ ರದ್ದತಿ ಮೊಹರುಗಳು ಈಗಾಗಲೇ ಅನಾವರಣಗೊಂಡಿವೆ. ಹುಬ್ಬಳ್ಳಿ, ಉಣಕಲ್ ಕೆರೆ ಚಿತ್ರಣದ ಅಂಚೆ ಮೊಹರು ಪ್ರಸ್ತುತ ಬಳಕೆಯಲ್ಲಿದೆ. ಬೇಂದ್ರೆ ನಿವಾಸದ ಅಂಚೆ ಮೊಹರು ಬಿಡುಗಡೆ ಹಿನ್ನೆಲೆ, ಪ್ರದೇಶ ಸಮಾಚಾರಕ್ಕಾಗಿ ಈ ಬಗ್ಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ, ಧಾರವಾಡ ವಲಯದ ಅಂಚೆ ಇಲಾಖೆ ಉಪ ಅಧೀಕ್ಷಕರಾದ ಎಸ್. ವಿಜಯ ನರಸಿಂಹ ಅವರು...

<><><>

ಧ್ವನಿ: ಎಸ್. ವಿಜಯ ನರಸಿಂಹ 36 ಸೆಕೆಂದುಗಳು

<><><>

ಗದಗ ಜಿಲ್ಲೆಯ ಇತಿಹಾಸ ಪ್ರಸಿದ್ಧ ಹಾಗೂ ಶಿಲ್ಪ ಕಲೆಗೆ ಪ್ರಸಿದ್ಧವಾಗಿರುವ, ಲಕ್ಕುಂಡಿ ಬ್ರಹ್ಮ ಜಿನಾಲಯ ದ ಅಂಚೆ ಪತ್ರವನ್ನು ಬಿಡುಗಡೆಗೊಳಿಸಲಾಯಿತು.

ಲಕ್ಕುಂಡಿ ಗ್ರಾಮದ ಶ್ರೀ ಅನ್ನದಾನೀಶ್ವರ ಮಠದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ, ಭಾರತೀಯ ಅಂಚೆ ಇಲಾಖೆ, ಕರ್ನಾಟಕ ವಲಯ ಪೋಸ್ಟ್ ಮಾಸ್ಟರ್ ಜನರಲ್ ಎಸ್. ರಾಜೇಂದ್ರಕುಮಾರ್ ಅವರು ಚಿತ್ರ ಅಂಚೆ ಪತ್ರವನ್ನು ಬಿಡುಗಡೆ ಗೊಳಿಸಿದರು.

<><><>

ಚಿತ್ತಾಪುರ ಕ್ಷೇತ್ರದಲ್ಲಿ, ರಾಜ್ಯದಲ್ಲಿಯೇ ಮಾದರಿಯಾಗಿ 150 ಕೋಟಿ ರೂಪಾಯಿ ವೆಚ್ಚದಲ್ಲಿ 87 ಹಳ್ಳಿಗಳ ಗ್ರಾಮಾಭಿವೃದ್ಧಿಗೆ ನೀಲನಕ್ಷೆ ಸಿದ್ಧಪಡಿಸಲಾಗಿದ್ದು, 15 ದಿನದಲ್ಲಿ ಇದಕ್ಕೆ ಚಾಲನೆ ನೀಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಚಿತ್ತಾಪುರ ಪಟ್ಟಣದಲ್ಲಿ, ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿ, ಕಾಗಿಣಾ ನದಿ ಮೂಲದಿಂದ 45 ಕೋಟಿ 53 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ, ಚಿತ್ತಾಪುರ ಪಟ್ಟಣ ಸುಧಾರಿತ ಕುಡಿಯುವ ನೀರು ಯೋಜನೆ ಹಾಗೂ 32 ಕೋಟಿ 81 ಲಕ್ಷ ರೂಪಾಯಿ ವೆಚ್ಚದಲ್ಲಿ ಭೀಮಾ ನದಿ ಮೂಲದಿಂದ, ವಾಡಿ ಪಟ್ಟಣಕ್ಕೆ ಸುಧಾರಿತ ಕುಡಿಯುವ ನೀರು ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಹಳ್ಳಿಗಳಲ್ಲಿ ಮೂಲಸೌಕರ್ಯ ಕಲ್ಪಿಸಲು, ಸಂಪೂರ್ಣ ಗ್ರಾಮಾಭಿವೃದ್ಧಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ. ಜನಸಂಖ್ಯೆ ಅನುಗುಣವಾಗಿ ಪ್ರತಿ ಹಳ್ಳಿಗೆ 1 ರಿಂದ 3.50 ಕೋಟಿ ರೂಪಾಯಿ ಅನುದಾನ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ನೀಡಲಾಗುವುದು ಎಂದರು.

<><><>

ಧಾರವಾಡದ ಕೃಷಿ ವಿಶ್ವವಿದ್ಯಾಲಯದ, 38 ನೇ ವಾರ್ಷಿಕ ಘಟಿಕೋತ್ಸವ ಇಂದು, ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಆಯೋಜಿತವಾಗಿದೆ. ರಾಜ್ಯಪಾಲ ಹಾಗೂ ಕುಲಪತಿ ಥಾವರಚಂದ್ ಗೆಹ್ಲೋಟ್ ಅಧ್ಯಕ್ಷತೆ ವಹಿಸಿದ್ದು, ಪದವಿ ಪ್ರದಾನ ಸಮಾರಂಭ ಪ್ರಗತಿಯಲ್ಲಿದೆ.

<><><>

ಧಾರವಾಡ ನಗರದ ಕೃಷಿ ಇಲಾಖೆ, ಜಂಟಿ ನಿರ್ದೇಶಕರ ಕಚೇರಿ ಆವರಣದಲ್ಲಿ, ನಿರ್ಮಾಣಗೊಂಡ, 'ಕೃಷಿ ಕೃತಕ ಬುದ್ಧಿಮತ್ತೆ ಕೇಂದ್ರವನ್ನು' ರಾಜ್ಯ ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ಉದ್ಘಾಟಿಸಿದರು.

<><><>

ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ಉತ್ತರ ಕನ್ನಡ ಜಿಲ್ಲೆ, ತಾಲೂಕು ಆಸ್ಪತ್ರೆಗಳಲ್ಲಿರುವ ಒಟ್ಟು 28 ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಶಿರಸಿ, ಭಟ್ಕಳ ಹಾಗೂ ಕ್ರಿಮ್ಸ್ ಕಾರವಾರ ಆಸ್ಪತ್ರೆಗಳು ಹಾಗೂ ನಮ್ಮ ಕ್ಲಿನಿಕ್ ಕೇಂದ್ರಗಳಿರುವ ಕಾರವಾರ, ಅಂಕೋಲಾ, ಭಟ್ಕಳ, ಹಳಿಯಾಳ, ಮಂಕಿಯಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗೆ, ಎಂ.ಬಿ.ಬಿ.ಎಸ್ ವಿದ್ಯಾರ್ಹತೆ ಹೊಂದಿರುವ ಹಾಗೂ ಕರ್ನಾಟಕ ಮೆಡಿಕಲ್ ಕೌನ್ಸಿಲ್‌ನಲ್ಲಿ ನೋಂದಣಿ ಹೊಂದಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>